## ಕರ್ನಾಟಕವಿಧಾನಪರಿಷತ್ತು

22-7-24

ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಟಿ.ಎ.ಶರವಣ ಇವರ ಶೂನ್ಯ ವೇಳೆಯಲ್ಲಿ ರಾಜ್ಯದಲ್ಲಿ ಡೆಂಘೀ ರುದ್ರ ನರ್ತನ ಹಿನ್ನೆಲೆಯಲ್ಲಿ ಆರೋಗ್ಯ ತುರ್ತು ಪರಿಸ್ಥಿತಿ ಘೋಷಿಸುವಂತೆ ಒತ್ತಾಯ ಕೇಳಿ ಬರುತ್ತಿದೆ. ಆದರೆ, 108 ಆ್ಯಂಬುಲೆನ್ಸ್ ಸೇವೆ ಒದಗಿಸುವ ಟೆಂಡರ್ ರದ್ದಾಗಿ ಏಳು ವರ್ಷ ಕಳೆದರೂ ಈವರೆಗೂ ಹೊಸಬರಿಗೆ ಟೆಂಡರ್ ನೀಡಲೂ ಆರೋಗ್ಯ ಇಲಾಖೆಗೆ ಸಾಧ್ಯವಾಗಿಲ್ಲ. ಇದು ತುರ್ತು ಆರೋಗ್ಯ ಸೇವೆಗಳ ಬಗೆಗಿನ ವಿಳಂಬ ಧೋರಣೆಯ ದ್ಯೋತಕ ಎಂಬ ಆರೋಪ ಕೇಳಿ ಬಂದಿದೆ. ನೂತನ ಸರ್ಕಾರ ಅಸ್ತಿತ್ವಕ್ಕೆ ಬಂದ ಬಳಿಕ ಆ್ಯಂಬುಲೆನ್ಸ್ ಸೇವೆಯಲ್ಲಿ ಬದಲಾವಣೆ ತರುವ ನಿಟ್ಟಿನಲ್ಲಿ 2023ರ ಜು.22ರಂದು ತಾಂತ್ರಿಕ ಸಲಹಾ ಸಮಿತಿ ನೇಮಿಸಲಾಗಿತ್ತು. ಈ ತಾಂತ್ರಿಕ ಸಲಹಾ ಸಮಿತಿ ವರದಿ ನೀಡಿ ತಿಂಗಳುಗಳೇ ಕಳೆದರೂ ಈವರೆಗೂ ಟೆಂಡರ್ ಕರೆಯಲು ಉನ್ನತ ಮಟ್ಟದ ಸಮಿತಿ ಒಪ್ಪಿಗೆ ನೀಡಿಲ್ಲ. ಹೀಗಾಗಿ ಆ್ಯಂಬುಲೆನ್ಸ್ ಸೇವೆಗೆ ಹಿಡಿದಿರುವ ಗ್ರಹಣ ಮುಂದುವರೆದಿದೆ. ರಾಜ್ಯದಲ್ಲಿ ತುರ್ತು ಅನಾರೋಗ್ಯ ಸಂಧರ್ಭಗಳಲ್ಲಿ ಆರೋಗ್ಯ ಕವಚ ಆ್ಯಂಬುಲೆನ್ಸ್ ಸೇವೆ ಒದಗಿಸಲು 2007ರಲ್ಲಿ ಟೆಂಡರ್ ಪಡೆದಿದ್ದ ಜಿವಿಕೆಯ ಸಂಸ್ಥೆಯ ಗುತ್ತಿಗೆಯನ್ನು ಅಸಮರ್ಪಕ ಸೇವೆ ಹಾಗೂ ನಿಯಮ ಉಲ್ಲಂಘನೆ ಕಾರಣ ನೀಡಿ 2017ರಲ್ಲಿ ಟೆಂಡರ್ ರದ್ದುಪಡಿಸಿತ್ತು. ಜಿವಿಕೆ-ಇಎಂಆರ್‌ಐ ಸಂಸ್ಥೆಯು ವಿಳಂಬ ಸೇವೆ, ಜಿಐಎಸ್ ಅಳವಡಿಕೆ ಮಾಡದಿರುವುದು, ಸಿಬ್ಬಂದಿಯ ನಿರ್ವಹಣೆ ವೈಫಲ್ಯ ಸೇರಿದಂತೆ ಟೆಂಡರ್ ಷರತ್ತುಗಳನ್ನು ಉಲ್ಲಂಘಿಸಿದೆ ಎಂಬ ಕಾರಣಕ್ಕೆ ಟೆಂಡರ್ ರದ್ದುಪಡಿಸಲಾಗಿತ್ತು. ಬಳಿಕ 3 ಬಾರಿ ಟೆಂಡರ್ ಕರೆದಿದ್ದರೂ ಯಾರೊಬ್ಬರೂ ಭಾಗವಹಿಸಿರಲಿಲ್ಲ. ಹೀಗಾಗಿ 2019 ರಲ್ಲಿ ಜಿವಿಕೆ ಹಾಗೂ ತುರ್ತು ಗ್ರೀನ್ ಹೆಲ್ತ್ ಜತೆ ಒಡಂಬಡಿಕೆ ಆಧಾರದ ಮೇಲೆ ಆ್ಯಂಬುಲೆನ್ಸ್ ಸೇವೆ ನೀಡಲಾಗುತ್ತಿದೆ. ಆದರೆ, 7 ವರ್ಷದಿಂದ ಅಧಿಕೃತ ಟೆಂಡರ್ ಪಡೆದಿರುವ ಆ್ಯಂಬುಲೆನ್ಸ್ ಸೇವಾದಾರ ಸಂಸ್ಥೆ ಇಲ್ಲದಂತಾಗಿದೆ. ಅದುದರಿಂದ, ಆ್ಯಂಬುಲೆನ್ಸ್ ಸೇವೆಯಲ್ಲಿ ಸತತವಾಗಿ ವ್ಯತ್ಯಯವಾಗುತ್ತಿದೆ. ಮುಂದುವರೆದು, 108 ಆ್ಯಂಬುಲೆನ್ಸ್ ಸೆ ಸೇವೆ ಕುರಿತು 2014 -19 ರವರೆಗಿನ ಪ್ರಕರಣಗಳ ಬಗ್ಗೆ ಸಿಎಜಿ ವರದಿ ಸಲ್ಲಿಸಿದ್ದು ಶೇ.60ರಷ್ಟು ಎಮರ್ಜನ್ಸಿ ಪ್ರಕರಣಗಳಲ್ಲಿ 108 ಆ್ಯಂಬು ಲೆನ್ಸ್ ಸೇವೆ ನಿಗದಿತ ಸಮಯಕ್ಕೆ ದೊರೆತಿಲ್ಲ ಮತ್ತು, 51 ಲಕ್ಷ ಎಮರ್ಜೆನ್ಸಿ ಪ್ರಕರಣಗಳಲ್ಲಿ 41.9 ಲಕ್ಷ ಮಾತ್ರ ಆ್ಯಂಬುಲೆನ್ಸ್ ನಿಯೋಜಿಸಲಾಗಿತ್ತು. ಈ ಹಿನ್ನೆಲೆಯಲ್ಲಿ ಟೆಂಡರ್ ರದ್ದು ಪಡಿಸಿ ಬೇರೆ `ಕಂಪನಿಗೆ ಟೆಂಡರ್ ನೀಡಲು ನಿರ್ಧರಿಸಲಾಗಿತು. ಆದರೆ ಒಡಂಬಡಿಕೆ ಆಧಾರದ ಮೇಲೆ 746 ಆಂಬ್ಯೂಲೆನ್ಸ್ ನಿರ್ವಹಿಸಲು ಅವಕಾಶ ನೀಡಲಾಗಿತ್ತು. ಆದರೆ ಒಡಂಬಡಿಕೆ ಮಾಡಿಕೊಂಡಿರುವ ಸಂಸ್ಥೆಗೆ ಸರ್ಕಾರ ಕಾಲಕಾಲಕ್ಕೆ ವೇತನ ನೀಡುತ್ತಿದ್ದರೂ ಅವರು ಸಿಬ್ಬಂದಿಗೆ ನೀಡುತ್ತಿಲ್ಲ, ಗುತ್ತಿಗೆ ಜತೆಗೆ ಸರ್ಕಾರಿ ಆಸ್ಪತ್ರೆ ಬದಲಿಗೆ ಖಾಸಗಿ ಆಸ್ಪತ್ರೆಗೆ ರೋಗಿಯನ್ನು ಕರೆದುಕೊಂಡು ಹೋಗುವುದು ರೋಗಿಯ ಬಳಿ ಹಣ ಪಡೆಯುವುದು ಸೇರಿದಂತೆ ಹಲವು ಸಮಸ್ಯೆಗಳಿಗೆ ಈವರೆಗೆ ಪರಿಹಾರ ಕಂಡುಕೊಂಡಿಲ್ಲ. ಆದ್ದರಿಂದ ಈ ನಿಟ್ಟಿನಲ್ಲಿ ತುರ್ತಾಗಿ ಸೂಕ್ತಕ್ರಮ ಕೈಗೊಳ್ಳುವ ಬಗ್ಗೆ

### ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಹೇಳಿಕೆ:-

ಕರ್ನಾಟಕದ ಜನರಿಗೆ ಉಚಿತ ತುರ್ತು ವೈದ್ಯಕೀಯ ಆಂಬ್ಯುಲೆನ್ಸ್ ಸೇವೆಯನ್ನು ಕರ್ನಾಟಕ ಸರ್ಕಾರವು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಡಿಯಲ್ಲಿ 108-ಆರೋಗ್ಯ ಕವಚ – ತುರ್ತು ಆಂಬ್ಯುಲೆನ್ಸ್ ಸೇವೆಯನ್ನು 14 ಆಗಸ್ಟ 2008 ರಿಂದ ಹತ್ತು ವರ್ಷಗಳ ಅವಧಿಗೆ ಇ.ಎಂ.ಆರ್.ಐ ಗ್ರೀನ್ ಹೆಲ್ತ್ ಸಂಸ್ಥೆಯ ಸಹಭಾಗಿತ್ವದಲ್ಲಿ ಮೂಲಕ ಒಡಂಬಡಿಕೆ (MoU) ಮಾದರಿಯಲ್ಲಿ ಸೇವೆಯನ್ನು ಪ್ರಾರಂಭಿಸಲಾಗಿರುತ್ತದೆ.

2017 ಸಾಲಿನಲ್ಲಿ ಒಡಂಬಡಿಕೆ ಮುಗಿಯುವ ಪೂರ್ವದಲ್ಲಿ ಸೇವೆಯಲ್ಲಿ ನ್ಯೂನತೆಯಿದ್ದ ಹಿನ್ನಲೆಯಲ್ಲಿ ಸದರಿ ಸೇವಾದಾರರೊಂದಿಗೆ ಮಾಡಿಕೊಂಡಿರುವ ಒಡಂಬಡಿಕೆಯನ್ನು ರದ್ದು ಗೊಳಿಸಲಾಗಿದೆ. ಸಾರ್ವಜನಿಕ ಹಿತದೃಷ್ಟಿಯಿಂದ ತುರ್ತು ಆರೋಗ್ಯ ಸೇವೆಯಲ್ಲಿ ಯಾವುದೇ ವ್ಯತ್ಯಯಗಳು ಉಂಟಾಗದಂತೆ ಸರ್ಕಾರದಿಂದ ಅಗತ್ಯ ಅನುಮೋದನೆಯನ್ನು ಪಡೆದು ಹೊಸ ಸೇವಾದಾರರು ಆಯ್ಕೆಯಾಗುವವರೆಗೂ ಇ.ಎಂ.ಆರ್.ಐ ಗ್ರೀನ್ ಹೆಲ್ತ್ ಸಂಸ್ಥೆಯವರನ್ನೇ ಮುಂದುವರೆಸಿಕೊಂಡು ಬರಲಾಗಿದೆ.

ಆರೋಗ್ಯ ಕವಚ-108 ತುರ್ತು ಆಂಬ್ಯುಲೆನ್ಸ್ ಸೇವೆಯಡಿಯಲ್ಲಿ ಪ್ರಸ್ತುತ 715 ಆಂಬ್ಯುಲೆನ್ಸ್ ಸೇವೆ ಒದಗಿಸಲಾಗುತ್ತಿದ್ದು, ಅದರಲ್ಲಿ 484 Basic Life Support (BLS) ಮತ್ತು 231 Advanced Life Support (ALS) ಆಂಬ್ಯುಲೆನ್ಸ್‌ಗಳು ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿವೆ.

108-ಆರೋಗ್ಯ ಕವಚ ಸೇವೆಯಡಿಯಲ್ಲಿ ಹೊಸ ಸೇವಾದಾರರನ್ನು ಆಯ್ಕೆ ಮಾಡಲು ನಡೆಸಲಾಗಿರುವ ಟೆಂಡರ್ ಪ್ರಕ್ರಿಯೆಗಳ ವಿವರಗಳು ಈ ಕೆಳಕಂಡಂತಿದೆ.

| ಟೆಂಡರ್ ಕರೆದಿರುವವಿವರಗಳು | ಟೆಂಡರ್ ರದ್ದಾಗಿರುವ ಕಾರಣಗಳು |
|---|---|
| ಟೆಂಡರ್ ಕಾಲ್-01<br>ಟೆಂಡರ್ ಕರೆದಿರುವ ದಿನಾಂಕ: 11-08-2017 | ಇ-ಆಡಳಿತ ವಿಭಾಗದವರೊಂದಿಗೆ ಚರ್ಚಿಸಲಾಗಿ ತಾಂತ್ರಿಕ ವೈಶಿಷ್ಟತೆಯ ಮಾನದಂಡಗಳನ್ನು ಮೌಲ್ಯ ಮಾಪನ ಮಾಡಲು ಸಾಧ್ಯವಾಗದ ಹಿನ್ನಲೆಯಲ್ಲಿ ಟೆಂಡರ್‌ನ್ನು ರದ್ದು ಗೊಳಿಸಲಾಗಿತ್ತು. |
| ಟೆಂಡರ್ ಕಾಲ್-02<br>ಟೆಂಡರ್ ಕರೆದಿರುವ ದಿನಾಂಕ:14-09-2020 | ಟೆಂಡರ್ ದಾಸ್ತಾವೇಜಿನಲ್ಲಿದ್ದಂತಹ ನ್ಯೂನತೆಗಳ ಹಿನ್ನಲೆಯಲ್ಲಿ ಸರ್ಕಾರದ ನಿರ್ದೇಶನದಂತೆ ಟೆಂಡರ್ ರದ್ದು ಗೊಳಿಸಲಾಗಿದೆ. |
| ಟೆಂಡರ್ ಕಾಲ್-03<br>ಟೆಂಡರ್ ಕರೆದಿರುವ ದಿನಾಂಕ:22-08-2022 | ಟೆಂಡರ್‌ನಲ್ಲಿ ಯಾವುದೇ ಬಿಡ್‌ಗಳು ಸ್ವೀಕೃತಿಯಾಗದ ಹಿನ್ನಲೆಯಲ್ಲಿ ಟೆಂಡರ್ ರದ್ದು ಗೊಳಿಸಲಾಗಿರುತ್ತದೆ |
| ಟೆಂಡರ್ ಕಾಲ್-04<br>ಟೆಂಡರ್ ಕರೆದಿರುವದಿನಾಂಕ: 09-01-2023 | ಟೆಂಡರ್ ದಾಸ್ತಾವೇಜಿನ ಕುರಿತಾಗಿ ದೂರುಗಳು ಬಂದ ಕಾರಣ ಟೆಂಡರ್‌ನ್ನು ರದ್ದುಗೊಳಿಸಲಾಗಿದೆ. |

ಆರೋಗ್ಯ ಕವಚ-108 ಆಂಬ್ಯುಲೆನ್ಸ್ ತುರ್ತು ಸೇವೆಯನ್ನು ಮೇಲ್ದರ್ಜೆಗೇರಿಸಿ, ಆಂಬ್ಯುಲೆನ್ಸ್ ಸಂಖ್ಯೆಗಳನ್ನು 750 ಕ್ಕೆ ಸೀಮಿತಿಗೊಳಿಸಿ 54 ಕರೆ ಕೇಂದ್ರದ ಆಸನ ಸಂಖ್ಯೆಯನ್ನು 75 ಆಸನಗಳ ತುರ್ತು ಕರೆ ಕೇಂದ್ರ ಹಾಗೂ ತುರ್ತು ವೈದ್ಯಕೀಯ ತರಬೇತಿ ಕೇಂದ್ರಗಳನ್ನು ಅಂದಾಜು ರೂ.1260.00 ಕೋಟಿ ವೆಚ್ಚದಲ್ಲಿ ಹಾಗೂ ಅರ್ಹ ಸೇವಾದಾರರನ್ನು ಮುಂದಿನ ಐದು ವರ್ಷಗಳ ಅವಧಿಗೆ ನಿರ್ವಹಿಸಿಲು ಕೆ.ಟಿ.ಪಿ.ಪಿ ಕಾಯಿದೆ 1999 ಮತ್ತು ನಿಯಮಗಳು 2000 ಅನ್ವಯ ಕ್ಯೂ.ಸಿ.ಬಿ.ಎಸ್ ಮಾದರಿಯಲ್ಲಿ ಉತ್ತಮ ಸೇವೆಗೆ ಅಗತ್ಯವಿರುವ ಎಲ್ಲಾ ಅಂಶಗಳನ್ನು ಅಳವಡಿಸಿಕೊಂಡು ಸೇವಾದಾರರನ್ನು ಆಯ್ಕೆ ಮಾಡಲು ಸಚಿವ ಸಂಪುಟ ಅನುಮತಿ ಮೇರೆಗೆ ಆದೇಶ ಸಂಖ್ಯೆ: ಆಕುಕ 213 ಸಿಜಿಇ 2021, ದಿನಾಂಕ: 04-03-2022 ರಲ್ಲಿ ಮಂಜೂರಾತಿ ನೀಡಲಾಗಿದೆ.

108-ಆರೋಗ್ಯ ಕವಚ ಸೇವೆಗೆ ಹೊಸ ಸೇವಾದಾರರನ್ನು ಆಯ್ಕೆ ಮಾಡುವ ಟೆಂಡರ್ ದಾಸ್ತಾವೇಜನ್ನು ಸಿದ್ಧಪಡಿಸಲು ಐಡೆಕ್ ಸಂಸ್ಥೆಯವರನ್ನು (Infrastructure Development Corporation Karnataka Limited) ನೇಮಿಸಲಾಗಿದೆ.

ಆದೇಶಸಂಖ್ಯೆ: ಆಕುಕ 168 ಸಿಜಿಇ 2023 ದಿನಾಂಕ: 19-07-2023 ರಲ್ಲಿ 108-ಆರೋಗ್ಯ ಕವಚ ಸೇವೆಯ ಸಮರ್ಪಕ ಸೇವೆಗಾಗಿ ಪ್ರಮುಖ ನೀತಿನಿರ್ಧಾರಗಳನ್ನು ಕೈಗೊಳ್ಳಲು ಅನುವಾಗುವಂತೆ ಸೂಕ್ತ ಅಭಿಪ್ರಾಯ ಹಾಗೂ ಮಾರ್ಗದರ್ಶನವನ್ನು ನೀಡಲು ಉನ್ನತ ಅಧಿಕಾರಿಗಳನ್ನು ಒಳಗೊಂಡ ಮಾಹಿತಿ ತಂತ್ರಜ್ಞಾನ ವೃತ್ತಿಪರರನ್ನು ಒಳಗೊಂಡಂತೆ ತಾಂತ್ರಿಕ ಸಮಿತಿಯನ್ನು ನಿರ್ದೇಶಕರು, ಐಐಐಟಿ-ಬಿ, ಬೆಂಗಳೂರು ಇವರ ಅಧ್ಯಕ್ಷತೆಯಲ್ಲಿ ರಚಿಸಲಾಗಿದೆ. ಇದರನ್ವಯ ನೀತಿ ನಿರ್ಧಾರಗಳನ್ನು ಕೈಗೊಳ್ಳಲು ತಾಂತ್ರಿಕ ಸಮಿತಿಯ ಸಭೆಗಳನ್ನು ದಿನಾಂಕ: 29-08-2023, 09-11-2023, 02-01-2024, 30-01-2024, 14-02-2024, 29-02-2024 ಮತ್ತು 26-03-2024 ರಂದು ನಡೆಸಲಾಗಿದ್ದು, ಟೆಂಡರ್ ದಾಸ್ತಾವೇಜನ್ನು ಅಂತಿಮಗೊಳಿಸಲಾಗುತ್ತಿದೆ.

ಆದೇಶ ಸಂಖ್ಯೆ: ಆಕುಕ 250 ಸಿಜಿಇ 2020 ದಿನಾಂಕ: 06-01-2021 ರಲ್ಲಿ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ ರವರ ಅಧ್ಯಕ್ಷತೆಯಲ್ಲಿ ಉನ್ನತಮಟ್ಟದ ಸಲಹಾ ಸಮಿತಿಯನ್ನು ರಚಿಸಲಾಗಿದ್ದು ಸದರಿ ಸಮಿತಿಯಲ್ಲಿ ತಯಾರಿಸಲಾಗಿರುವ ದಾಸ್ತಾವೇಜನ್ನು ಮಂಡಿಸಿ ಅತೀ ಶೀಘ್ರದಲ್ಲಿ ಹೊಸ ಸೇವಾದಾರರನ್ನು ಆಯ್ಕೆ ಮಾಡುವ ಟೆಂಡರ್ ಅನ್ನು ಕರೆಯಲು ಕ್ರಮವಹಿಸಲಾಗುವುದು.

108-ಆರೋಗ್ಯ ಕವಚ ಸೇವೆಯಲ್ಲಿ ಪ್ರಸ್ತುತ 715 ಆಂಬ್ಯುಲೆನ್ಸ್‌ಗಳು ಸೇವೆ ಒದಗಿಸುತ್ತಿದ್ದು, ಅದರಲ್ಲಿ 262 ಹಳೆಯ ಆಂಬ್ಯುಲೆನ್ಸ್‌ಗಳನ್ನು ಸೇವೆಯಿಂದ ಹಿಂಪಡೆದು, ಆರ್ಥಿಕ ಸಾಲು 2023-24 ನೇ ಸಾಲಿನಲ್ಲಿ 262 ಹೊಸ ಆಂಬ್ಯುಲೆನ್ಸ್‌ಗಳನ್ನು ವಿಲೀನಗೊಳಿಸಲಾಗಿದೆ. ಎಲ್ಲಾ ತುರ್ತು ಸಂದರ್ಭದಲ್ಲಿ 108-ಆರೋಗ್ಯ ಕವಚ ಆಂಬ್ಯುಲೆನ್ಸ್ ಮೂಲಕ ಸೇವೆಯನ್ನು ಒದಗಿಸಲು ಕ್ರಮವಹಿಸಲಾಗುತ್ತಿದೆ

**ಆಕುಕ 101 ಎಸ್‌ಬಿವಿ 2024(ಭಾ)**

**(ದಿನೇಶ ಗುಂಡೂರಾವ್)**
**ಆರೋಗ್ಯ ಮತ್ತು ಕುಟುಂಬ ಕಲ್ಯಾಣ**
**ಸಚಿವರು**